# ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ, ಹೊಳಲ್ಕೆರೆ.

## ಸಿ.ಸಿ. ನಂ. 953/2020

ದಿನಾಂಕ 18/11/2025

| | | | | |
|---|---|---|---|---|
| ಸಾಕ್ಷಿದಾರರ ಹೆಸರು | : | ಸಿ.ಮಧುಸೂದನ್ | ಪಿ.ಡಬ್ಲ್ಯು. | 3 |
| ತಂದೆಯ ಹೆಸರು | : | ಚೌಡಯ್ಯ | ಸಿ.ಡಬ್ಲ್ಯು. | 22 |
| ವಯಸ್ಸು | : | 53 ವರ್ಷ | | |
| ಉದ್ಯೋಗ | : | ಡಿ.ವೈ.ಎಸ್.ಪಿ., ಲೋಕಾಯುಕ್ತ ಠಾಣೆ, ಹಾವೇರಿ | | |
| ವಾಸ ಸ್ಥಳ | : | ಹಾವೇರಿ | | |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ – ಮಾನ್ಯ ಸ.ಸ.ಅ. ರವರಿಂದ**

ನಾನು ದಿನಾಂಕ 27/07/2016 ರಿಂದ 19/07/2019 ರವರೆಗೆ ಹೊಳಲ್ಕೆರೆ ವೃತ್ತ ಕಚೇರಿಯ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿನಾಂಕ 07/10/2018 ರಂದು ಈ ಪ್ರಕರಣದ ಕಡತವನ್ನು ಚಾಸಾ–21 ರವರಿಂದ ಪಡೆದುಕೊಂಡು ತನಿಖೆಯನ್ನು ಮುಂದುವರೆಸಿ, ಅದೇ ದಿನ ದಾವಣಗೆರೆಯ ಆಸ್ಪತ್ರೆಯ ಶವಾಗಾರಕ್ಕೆ ಭೇಟಿ ನೀಡಿ ಪ್ರಸ್ತುತ ಪ್ರಕರಣದಲ್ಲಿ ಮೃತಪಟ್ಟ ನಾಗಪ್ಪ ತಂದೆ ಲೇಟ್ ಕಲ್ಲಪ್ಪರವರ ಶವದ ಶವ ತನಿಖಾ ಪಂಚನಾಮೆಯನ್ನು ಚಾಸಾ–6 ರಿಂದ 8 ರವರ ಸಮಕ್ಷಮ ಜರುಗಿಸಿರುತ್ತೇನೆ. ಪಂಚನಾಮೆ ಕಾಲಕ್ಕೆ ಪೋಟೋಗಳನ್ನು ತೆಗೆಸಿರುತ್ತೇನೆ. ಸಾಕ್ಷಿಯು ಶವ ಪಂಚನಾಮೆಯನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ–8, 8(ಎ) ಎಂದು ಗುರುತಿಸಲಾಯಿತು. ಶವ ತನಿಖಾ ಪಂಚನಾಮೆ ಕಾಲಕ್ಕೆ ತೆಗೆಸಿದ ಫೋಟೋಗಳನ್ನು ಸಾಕ್ಷಿ ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ–9 ಮತ್ತು 10 ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ–6 ರಿಂದ 8 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಶವ ಪಂಚನಾಮೆ ಕ್ರಮ ಜರುಗಿಸಿದ ನಂತರ ಮೃತನ ಶವವನ್ನು ಪಿ.ಎಂ. ಮಾಡಿಸಲು ಚಾಸಾ–19 ರವರಿಗೆ ವಹಿಸಿಕೊಟ್ಟಿದ್ದು, ಸದರಿಯವರು ಮರಣೋತ್ತರ ಪರೀಕ್ಷೆಯ ನಂತರ ವರದಿಯನ್ನು ನೀಡಿರುತ್ತಾರೆ. ಅದೇ ದಿನ ಚಾಸಾ–18 ಮತ್ತು 19 ರವರನ್ನು ವಿಚಾರಿಸಿ ಅವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

ದಿನಾಂಕ 26/10/2018 ರಂದು ಪ್ರಕರಣದಲ್ಲಿ ಅಪಘಾತಪಡಿಸಿದ ವಾಹನದ ಐಎಂವಿ ವರದಿಯನ್ನು ನೀಡಲು ಚಾಸಾ-15 ರವರಿಗೆ ನಿವೇದನೆಯನ್ನು ಕಳುಹಿಸಿಕೊಟ್ಟಿರುತ್ತೇನೆ.

ದಿನಾಂಕ 28/10/2018 ರಂದು ಪ್ರಸ್ತುತ ಪ್ರಕರಣದ ಆರೋಪಿತನು ಸ್ವ ಇಚ್ಚೆಯಿಂದ ಠಾಣೆಗೆ ಹಾಜರಾಗಿದ್ದು ಆತನ ವಿರುದ್ಧ ದಸ್ತಗಿರಿ ಕ್ರಮ ಜರುಗಿಸಿ ಸೂಕ್ತ ಜಾಮೀನಿನ ಮೇಲೆ ಆತನನ್ನು ಬಿಡುಗಡೆಗೊಳಿಸಿರುತ್ತೇನೆ.

ಅದೇ ದಿನ ಅಪಘಾತಕ್ಕೀಡಾದ ವಾಹನದ ಆರ್.ಸಿ. ಮಾಲೀಕರಾದ ಚಾಸಾ-14 ರವರು ವಾಹನದ ದಾಖಲಾತಿಗಳೊಂದಿಗೆ ಠಾಣೆಗೆ ಬಂದು ಹಾಜರಾಗಿದ್ದು, ಅವುಗಳನ್ನು ಪರಿಶೀಲಿಸಿ ಅವರಿಂದ ಸೂಕ್ತ ಇಂಡೆಮ್ನಿಟಿ ಬಾಂಡ್ ಪಡೆದು ವಾಹನವನ್ನು ಅವರ ವಶಕ್ಕೆ ನೀಡಿರುತ್ತೇನೆ. ಸಾಕ್ಷಿಯು ಇಂಡೆಮ್ನಿಟಿ ಬಾಂಡ್ ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-11, 11(ಎ) ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ-14 ರವರ ಹೇಳಿಕೆ, ಚಾಸಾ-11 ರಿಂದ 13 ರವರ ಮರು ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ.

ದಿನಾಂಕ 01/11/2018 ರಂದು ಪ್ರಕರಣದ ಗಾಯಾಳು ಚಾಸಾ-1 ಇವರ ಗಾಯದ ಪ್ರಮಾಣ ಪತ್ರ ಚಾಸಾ-17 ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಗಾಯದ ಪ್ರಮಾಣ ಪತ್ರವನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ, ನಿಪಿ-12, 12(ಎ) ಎಂದು ಗುರುತಿಸಲಾಯಿತು. ಅದೇ ದಿನ ಮೃತನ ಪಿ.ಎಂ. ವರದಿಯನ್ನು ಚಾಸಾ-16 ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಪಿ.ಎಂ. ವರದಿ ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-13, 13(ಎ) ಎಂದು ಗುರುತಿಸಲಾಯಿತು.

ದಿನಾಂಕ 23/11/2018 ರಂದು ಪ್ರಕರಣದಲ್ಲಿ ಅಪಘಾತಕ್ಕೆ ಒಳಪಟ್ಟ ವಾಹನದ ಐಎಂವಿ ವರದಿಯನ್ನು ಚಾಸಾ-15 ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸಾಕ್ಷಿಯು ಐ.ಎಂ.ವಿ ವರದಿಯನ್ನು ಮತ್ತು ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ ಮೇರೆಗೆ ಅವುಗಳನ್ನು ನಿಪಿ-14, 14(ಎ) ಎಂದು ಗುರುತಿಸಲಾಯಿತು. ನಂತರ ಪ್ರಸ್ತುತ ಪ್ರಕರಣದ ತನಿಖೆ ಮುಕ್ತಾಯಗೊಂಡಿದ್ದು, ಆರೋಪಿತನ ವಿರುದ್ಧ ಸಾಕಷ್ಟು ಸಾಕ್ಷ್ಯಾಧಾರಗಳು ಕಂಡುಬಂದಿದ್ದರಿಂದ ದೋಷಾರೋಪಣಾ ಪಟ್ಟಿ ಸಲ್ಲಿಸಿರುತ್ತೇನೆ.

ಸಾಕ್ಷಿಯು ಆರೋಪಿತನನ್ನು ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ನುಡಿದಿದ್ದು, ಆರೋಪಿ ಪರ ವಕೀಲರು ಗೈರು ಹಾಜರಾತಿ ವಿನಾಯಿತಿ ಅರ್ಜಿಯನ್ನು ಸಲ್ಲಿಸಿದ್ದರಿಂದ ಆರೋಪಿಯನ್ನು ಗುರುತಿಸುವಿಕೆಯ ಬಗ್ಗೆ ಯಾವುದೇ ತಕರಾರು ಇಲ್ಲವೆಂದು ತಿಳಿಸಿದ್ದರಿಂದ ಆರೋಪಿಯನ್ನು ಗುರುತಿಸಲಾಗಿರುತ್ತದೆ ಎಂದು ತೆಗೆದುಕೊಳ್ಳಲಾಗಿರುತ್ತದೆ.

**ಪಾಟೀಸವಾಲು – ಆರೋಪಿ ಪರ – ಶ್ರೀ ಟಿ.ವಿ. ವಕೀಲರಿಂದ**

ನಾನು ಈ ಪ್ರಕರಣದ ಯಾವುದೇ ಕಡತವನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಯಾವುದೇ ಶವ ಪಂಚನಾಮೆ ಕ್ರಮ ಜರುಗಿಸಿಲ್ಲ, ಯಾವುದೇ ಪಿಎಂ ವರದಿಯನ್ನು ಪಡೆದುಕೊಂಡಿರುವುದಿಲ್ಲ, ಯಾವುದೇ ಗಾಯದ ಪ್ರಮಾಣ ಪತ್ರಗಳನ್ನು ಪಡೆದುಕೊಂಡಿಲ್ಲ ಮತ್ತು ಯಾವುದೇ ಐಎಂವಿ ವರದಿಯನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಈ ಪ್ರಕರಣದಲ್ಲಿ ಯಾವುದೇ ಸಾಕ್ಷಿದಾರರ ಹೇಳಿಕೆಗಳನ್ನು ಮತ್ತು ಮರು ಹೇಳಿಕೆಗಳನ್ನು ಪಡೆದುಕೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿತನ ತಪ್ಪಿನಿಂದ ಯಾವುದೇ ಅಪಘಾತ ಸಂಭವಿಸದೇ ಇದ್ದರೂ ಸಹ ಆತನ ವಿರುದ್ಧ ಸುಳ್ಳು ಅಂಶಗಳಿಂದ ಕೂಡಿದ ದೋಷಾರೋಪಣಾ ಪಟ್ಟಿ ಸಲ್ಲಿಸಿ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆ ಪ್ರಮಾಣೆಯಲ್ಲಿ ತಿಳಿಸಿದ ಸಂಗತಿಗಳೆಲ್ಲ ಸುಳ್ಳಿನಿಂದ ಕೂಡಿವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ – ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ. ಸರಿ ಇದೆ.

C/C **ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ., ಹೊಳಲ್ಕೆರೆ.**